ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194,</u>

## ವಾರ್ಡ್ ಕಛೇರಿಯಲ್ಲಿ ದಿನಾಂಕ: 05-01-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು |
|---|
| 1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ.<br>3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>4. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>5. ಆರೋಗ್ಯಾಧಿಕಾರಿಗಳು, ಗೊಟ್ಟಿಗೆರೆ.<br>6. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 194, ಗೊಟ್ಟಿಗೆರೆ.<br>7. ಕಿರಿಯ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>8. ತೋಟಗಾರಿಗೆ ಸಹಾಯಕರು, ಗೊಟ್ಟಿಗೆರೆ<br>9. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.194, ಗೊಟ್ಟಿಗೆರೆ<br><br><u>ಸ್ಥಳೀಯ ಸಂಘ ಸದಸ್ಯರು:-</u><br>1. ಅಧ್ಯಕ್ಷರು, ರಾಯಲ್ ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>2. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್.<br>3. ಅಧ್ಯಕ್ಷರು, ಹಿಮಗಿರಿ ಮೆಡೋಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>4. ಅಧ್ಯಕ್ಷರು, ಜೆ.ಪಿ ನಗರ, 9ನೇ ಹಂತ, 7ನೇ ಬ್ಲಾಕ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>5. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ |

ದಿನಾಂಕ: 05-01-2022 ರಂದು ಮಧ್ಯಾಹ್ನ 03:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್-19 ಸಂಬಂಧ ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಸದರಿ ಕೋವಿಡ್-19 ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಸದರಿ ಸಕ್ರಿಯ ಪ್ರಕರಣಗಳು 39 ಇದ್ದು, ನಿಯಂತ್ರಣ ಕಾರ್ಯಕ್ರಮವನ್ನು ತೀವ್ರಗತಿಯಲ್ಲಿ ನಡೆಸುತ್ತಿದ್ದು ಪರೀಕ್ಷಾ ಮಾದರಿ ಸಂಗ್ರಹಣೆಯನ್ನು ಹೆಚ್ಚಿಸಿದ್ದು ಸದರಿ ವಾರ್ಡ್ ನಲ್ಲಿ 4 ಮಾದರಿ ಸಂಗ್ರಹಣೆ ತಂಡಗಳು ಕರ್ತವ್ಯ ನಿರ್ವಹಿಸುತ್ತಿದ್ದು, ದೈನಂದಿನ 271 ಮಾದರಿ ಸಂಗ್ರಹಣೆಯ ಗುರಿಯನ್ನು ನೀಡಲಾಗಿದ್ದು ಸದರಿ ನೀಡಲಾಗಿರುವ ಗುರಿ ಯ ಅನುಸಾರ ಸಂಗ್ರಹಿಸಲಾಗುತ್ತಿದೆ ಮತ್ತು ಲಸಿಕಾ ಕಾರ್ಯಕ್ರಮವನ್ನು ವಾರ್ಡ್ ನ ಎಲ್ಲಾ ಸ್ಥಳಗಳಲ್ಲು ಸ್ಥಳೀಯ ಮುಖಂಡರುಗಳು ಮತ್ತು ನಿವಾಸಿಗಳ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ನಡೆಸಲಾಗುತ್ತಿದೆ.

Total No. of Vaccination done till now: 73268
Total No. of Vaccinated aged(45) above: 31080
Total No. of Vaccinated aged(18) above: 42188

1st Dose Vaccinated for 45+age : 15572
2nd Dose Vaccinated for 45+age : 15508
1st Dose Vaccinated for 18+age : 21481
2nd Dose Vaccinated for 18+age : 20707

ದಿನಾಂಕ 03-01-2022 ರಿಂದ 15-17 ವರ್ಷದೊಳಗಿನ ವಯೋಮಿತಿಯವರಿಗೆ ಲಸಿಕಾ ಕಾರ್ಯಕ್ರಮವನ್ನು ಪ್ರಾರಂಭಿಸುತ್ತಿದ್ದು, ಸದರಿ ಎಲ್ಲಾ ಶಾಲೆಗಳಿಂದ ಮಾಹಿತಿ ಪಡೆಯಲಾಗುತ್ತಿದೆ ಎಂದು ತಿಳಿಸಿದರು ಹಾಗೂ COVID APPROPRIATE BEHAVIOUR (CAB) ನ್ನು ಜಾರಿಗೊಳಿಸಲು ಸ್ಥಳೀಯ ಮುಖಂಡರುಗಳು ಮತ್ತು ನಿವಾಸಿಗಳ ಸಂಘ ಸಂಸ್ಥೆಗಳ ಸಹಕಾರವನ್ನು ಕೋರಲಾಯಿತು.

2. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

(I) ವಾರ್ಡ್ ಕಛೇರಿ ರಸ್ತೆಯಲ್ಲಿರುವ ಪಾರ್ಕಿನಲ್ಲಿ ಘನತ್ಯಾಜ್ಯವನ್ನು ತೆರವುಗೊಳಿಸಲಾಗಿರುವ ಬಗ್ಗೆ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಗಾಯಾತ್ರಿ ತಪೋವನಾ, ಕ್ರಿಸ್ಟಲ್ ಬೆರಿಲ್ ಅಪಾರ್ಟ್ಮೆಂಟ್ ರ ಎದುರು ದುರಸ್ಥಿಗೊಂಡಿರುವ ಕಂಬಗಳನ್ನು ಈ ವಾರದಲ್ಲಿ ತೆರುವುಗೊಳಿಸುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ತಿಳಿಸಿದರು.

(II) ಸುರಭಿನಗರ, ಬಿ.ಡಿ.ಎ ಬಡಾವಣೆ, ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಸ್ಟಾರ್ ಬಝಾರ್ ಬಸ್ ನಿಲ್ದಾಣದಲ್ಲಿ ಬೀದಿ ದೀಪಗಳನ್ನು ದುರಸ್ಥಿಗೊಳಿಸಲು ಸಹಾಯಕ ಅಭಿಯಂತರರು (ವಿದ್ಯುತ್) ನಿರ್ವಾಹಕ ಗುತ್ತಿಗೆದಾರರೊಂದಿಗೆ ಸ್ಥಳ ವೀಕ್ಷಿಸಿ ಕ್ರಮ ವಹಿಸಿ ಮುಂದಿನ ಸಭೆಯಲ್ಲಿ ಅನುಪಾಲನಾ ವರದಿ ಸಲ್ಲಿಸುವುದಾಗಿ ತಿಳಿಸಿದರು.

(III) ರಾಯಲ್ ಕೌಂಟಿ ಬಡಾವಣೆ ಹಾಗೂ ಕೆಂಬತಹಳ್ಳಿ ರಸ್ತೆಯಲ್ಲಿ ವಿದ್ಯುತ್‌ನ ಏರಿಳಿತವಿದ್ದು, ಸದರಿ ಚಾಲ್ತಿಯಲ್ಲಿರುವ ಭೂಗತ ಕೇಬಲ್ ಕಾಮಗಾರಿ ಪೂರ್ಣಗೊಂಡ ನಂತರ ವಿದ್ಯುತ್ ವ್ಯತ್ಯಯ ಸಮಸ್ಯೆಗೆ ಪರಿಹಾರ ದೊರೆಯಲಿದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ತಿಳಿಸಿದರು.

(IV) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿ Transformer ದುರಸ್ಥಿ ಕಾರ್ಯವನ್ನು ಕೂಡಲೆ ಕೈಗೊಳ್ಳಲು ತಿಳಿಸಲಾಯಿತು.

(V) ಸೌತ್ ಅವೆನ್ಯೂ ಬಡಾವಣೆಯಲ್ಲಿ ಟ್ರಾನ್ಸ್‌ಫಾರ್ಮರ್ ದುರಸ್ಥಿಗೊಂಡಿದ್ದು ಸ್ಥಳಕ್ಕೆ ಭೇಟಿನೀಡಿ ದುರಸ್ಥಿ ಕಾರ್ಯವನ್ನು ಕೂಡಲೆ ಕೈಗೊಳ್ಳಲು ಸೂಚಿಸಲಾಯಿತು.

4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಸೌತ್ ಅವೆನ್ಯೂ ಬಡಾವಣೆಯಲ್ಲಿ ಒಳಚರಂಡಿ ಸಂಪರ್ಕದ ಮಿಸ್ಸಿಂಗ್ ಲಿಂಕ್ಸ್ ಕಾರ್ಯದ ಪ್ರಗತಿಯನ್ನು ಮುಂದಿನ ಸಭೆಯಲ್ಲಿ ಸಲ್ಲಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(II) ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯಲ್ಲಿ ನಿಯತಕಾಲಿಕವಾಗಿ ಕೈಗೊಳ್ಳುತ್ತಿರುವ ಕುಡಿಯುವ ನೀರಿನ ಪರಿಕ್ಷಾ ಫಲಿತಾಂಶ ವರದಿಯನ್ನು ನೀಡಲು ಹಲವು ಸಭೆಗಳಲ್ಲಿ ತಿಳಿಸಿದರೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಕ್ರಮವಹಿಸಿರುವುದಿಲ್ಲ. ವಿಷಯವು ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿರುವುದರಿಂದ ಪರೀಕ್ಷಾ ವರದಿಗಳನ್ನು ನಿಯತಕಾಲಿಕವಾಗಿ ಹಂಚಿಕೊಳ್ಳಲು ಸೂಚನೆ ನೀಡಲಾಗಿದೆ.

(III) ಕೆ.ಸಿ.ಎ ಬಡಾವಣೆ 4ನೇ ಅಡ್ಡ ರಸ್ತೆಯಲ್ಲಿ, ಒಳಚರಂಡಿ ನೀರು ಸೋರಿಕೆಯಿದ್ದು, ಸದರಿ ದುರಸ್ಥಿ ಕಾರ್ಯದ ಬಗ್ಗೆ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಮತ್ತೊಮ್ಮೆ ಸೂಚಿಸಲಾಯಿತು.

(IV) ಬಿ.ಡಿ.ಎ ಅಪಾರ್ಟ್‌ಮೆಂಟ್‌ರಲ್ಲಿ ಸಂಸ್ಕರಿಸಿದ ನೀರಿನಿಂದ ದುರ್ವಾಸನೆ ಉಂಟಾಗುತ್ತಿದ್ದು, ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಮತ್ತೊಮ್ಮೆ ತಿಳಿಸಲಾಯಿತು.

(V) ಜೆ.ಪಿ.ನಗರ, 9ನೇ ಹಂತ, 7ನೇ ಬ್ಲಾಕ್ ರಲ್ಲಿ ಮ್ಯಾನ್ಹೋಲ್ ಮುಚ್ಚಳಗಳ ನಿರ್ಮಾಣ ಕಾರ್ಯವು ಜನವರಿ ಮಾಹೆಯಲ್ಲಿ ಪೂರ್ಣಗೊಳ್ಳುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಸಭೆಗೆ ತಿಳಿಸಿದರು.

(VI) ಸುಬ್ಬರಾಯನ ಕೆರೆಗೆ ಒಳಚರಂಡಿ ನೀರು ಹರಿಯುತ್ತಿರುವುದರ ಬಗ್ಗೆ ಕೂಡಲೆ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

**5.** ಮಳೆ ನೀರು, ಚರಂಡಿ ಕಾಮಗಾರಿ ಕುರಿತು.

(I) ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಸೋಲಾರಿಸ್ ಅಪಾರ್ಟ್‌ಮೆಂಟ್ ಹಾಗೂ ಗಾರ್ಮೆಂಟ್ಸ್ ಕಾರ್ಖಾನೆ ರವರು ಪಕ್ಕದಲ್ಲಿರುವ ಹಿಮಗಿರಿ ಮೆಡೋಸ್ ಕಾಂಪೌಂಡ್ ಗೋಡೆಯಲ್ಲಿ ರಂಧ್ರ ಮಾಡಿ ತ್ಯಾಜ್ಯ ನೀರನ್ನು ಬಿಡುತ್ತಿರುವ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಹಾಗೂ ಪಾಲಿಕೆಯ ಆರೋಗ್ಯ ಪರಿವೀಕ್ಷಕರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

**6.** ರಸ್ತೆ ಕಾಮಗಾರಿ ಹಾಗೂ ರಸ್ತೆ ಪಾದಚಾರಿ ಬಗ್ಗೆ.

(I) ಹಿಂದಿನ ಸಭೆಯಲ್ಲಿ ಕೆ.ಸಿ.ಎ ಬಡಾವಣೆಯ 4 ರಸ್ತೆಗಳಲ್ಲಿ ಡಾಂಬರೀಕರಣ ಕೈಗೊಳ್ಳಲು ಕೋರಿದ್ದು, ಈ ಸಂಬಂಧ ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿದ್ದು ಮುಂದಿನ ಕ್ರಿಯಾ ಯೋಜನೆಯಲ್ಲಿ ಪ್ರಸ್ತಾಪಿಸುವುದಾಗಿ ಸಭೆಗೆ ತಿಳಿಸಿದರು.

**ಈ ಮೇಲೆ ತಿಳಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಸಲಾಯಿತು.**

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸೆಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.